ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 01 ~~145~~ ಎಎಸ್‌ಡಿ 04

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 30-3-2004.

## ಸುತ್ತೋಲೆ

ವಿಷಯ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ವಿಷಯ ಸಮಿತಿಯ ಒಂದನೇ ವರದಿ 2002-03 ರಜಾ ದಿನಗಳಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಸಹಿ ಮಾಡಲು ಕಡ್ಡಾಯವಾಗಿ ಒಬ್ಬ ಅಧಿಕಾರಿಯನ್ನು ನೇಮಿಸುವ ಬಗ್ಗೆ

ಉಲ್ಲೇಖ: 1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರದ ಸಂ: ಆಕುಕ 185 ಆಯುಕ್ತರು 02-03 ದಿ: 6-2-2003

2) ದಿನಾಂಕ 10-3-2003ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ: ಆಕುಕ:191:ಹೆಚ್‌ಎಸ್‌ಹೆಚ್ 2003

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ವಿಷಯ ಸಮಿತಿಯು ಶಿಫಾರಸ್ಸು ಮಾಡಿದಂತೆ ಸರ್ಕಾರಿ ಆಸ್ಪತ್ರೆಗಳಲ್ಲಿ ಮರಣೋತ್ತರ ಪರೀಕ್ಷೆ ಮಾಡುವಾಗ ತಾಲ್ಲೂಕು ಮ್ಯಾಜಿಸ್ಟ್ರೇಟರ ಸಹಿ ಬೇಕಾಗಿದ್ದು, ಒಂದೊಂದು ಸಲ 2-3 ದಿವಸಗಳು ಒಟ್ಟಾಗಿ ರಜೆ ಬಂದಾಗ ಶವಗಳ ಮರಣೋತ್ತರ ಪರೀಕ್ಷೆ ಮಾಡಲು ಶವವನ್ನು ಹಾಗೇ ಇಟ್ಟುಕೊಂಡು ಕಾನೂನಿನ ವಿಧಿವಿಧಾನಗಳನ್ನು ಪಾಲಿಸಲು ಅಧಿಕಾರಿಗಳನ್ನು ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದು ಹಾಗೂ ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ತರಹದ ತೊಂದರೆಯನ್ನು ನಿವಾರಿಸಲು ರಜಾ ದಿವಸಗಳಲ್ಲಿ ಶವಗಳ ಮರಣೋತ್ತರ ಪರೀಕ್ಷೆ ನಡೆಸಿ ಸಹಿ ಮಾಡಲು ಪರ್ಯಾಯವಾಗಿ ಒಬ್ಬ ಕಂದಾಯ ಇಲಾಖೆಯ ಅಧಿಕಾರಿಯನ್ನು ಸಕ್ಷಮ ಪ್ರಾಧಿಕಾರಿಯಾಗಿ ನೇಮಿಸುವ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಕ್ತ ವ್ಯವಸ್ಥೆ ಮಾಡಲು ಕ್ರಮ ವಹಿಸತಕ್ಕದ್ದು.

30/3/04

(ಮಾಚ್ ಅಹಮ್ಮದ್ ಷರೀಫ್)
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ (ಸೇವೆಗಳು).

ಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
2) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3) ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ, 105, ಕಾವೇರಿ ಭವನ, ಬೆಂಗಳೂರು.
4) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ.
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
6) ರಾಜ್ಯದ ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು.
7) ರಾಜ್ಯದ ಎಲ್ಲಾ ಉಪವಿಭಾಗದ ಸಹಾಯಕ ಆಯುಕ್ತರು.
8) ರಾಜ್ಯ ಎಲ್ಲಾ ತಹಶೀಲ್ದಾರ್‌ಗಳು.
9) ಶಾಖಾ ರಕ್ಷಾ ಕಡತ.

30/4
30/4/04